**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2013-14 ಸಾಲಿನ ಅವಧಿಯಲ್ಲಿ ಗ್ರಾಮ ಪಂಚಾಯತ್ ಮಟ್ಟದಲ್ಲಿ NGO ಸಂಸ್ಥೆಗಳ ಮುಖಾಂತರ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಅರಿವು ಮೂಡಿಸುವ ಕಾರ್ಯಕ್ರಮ ಕುರಿತು ತರಬೇತಿ ನಡೆಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ರವರ ಪತ್ರ ಸಂ:ಮುಇಂ:ಪಂರಾಇಂಇ:ಬೆಂ;ಹೆಚ್ಆರ್‌ಡಿ:ಭೂವಿ:2011-12/13517 ದಿ: 26.03.2012;
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/48/ಗ್ರಾನೀಸ(2)2012, ದಿನಾಂಕ:29.03.2012;
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು ರವರ ಪತ್ರ ಸಂ:ಮುಇಂ:ಪಂರಾಇಂಇ:ಬೆಂ;ಹೆಚ್ಆರ್‌ಡಿ:ಭೂವಿ:2012-13 ದಿನಾಂಕ:14.08.2013

---

**ಪೀಠಿಕೆ:**

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಜನರ ಜೀವನಮಟ್ಟವನ್ನು ಉತ್ತಮಗೊಳಿಸುವ ಹಿನ್ನೆಲೆಯಲ್ಲಿ, ಸರ್ಕಾರದಿಂದ ರೂಪಿಸಲಾಗುವ ಕಾರ್ಯಕ್ರಮಗಳಲ್ಲಿ ಒಂದಾದ ಕುಡಿಯುವ ನೀರಿನ ಬಳಕೆ ಮತ್ತು ನೈರ್ಮಲ್ಯ ಕಾರ್ಯಕ್ರಮವು ಅತಿ ಮುಖ್ಯವಾಗಿರುತ್ತದೆ. ಕುಡಿಯುವ ನೀರಿನ ಬಳಕೆಯ ಬಗ್ಗೆ ಗ್ರಾಮೀಣ ಜನತೆಗೆ ಅರಿವು ಮೂಡಿಸುವುದು ಮತ್ತು ನೈರ್ಮಲ್ಯದ ವಿಚಾರವಾಗಿ ಸ್ವಚ್ಛತೆ ಮತ್ತು ಶುಭ್ರತೆಯನ್ನು ಕಾಪಾಡಿಕೊಳ್ಳುವುದರ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ರೂಪಿಸಬೇಕಾಗಿರುತ್ತದೆ. ಈ ಬಗ್ಗೆ ಕಾರ್ಯಕ್ರಮಗಳನ್ನು ಗೋಡೆ ಬರಹ, ಜಾನಪದ ಗೀತೆಗಳು, ಬೀದಿ ನಾಟಕಗಳು ಹಾಗೂ ಆಧುನಿಕ ಮಾಧ್ಯಮಗಳಾದ ದೂರದರ್ಶನ, ಆಕಾಶವಾಣಿ, ದಿನಪತ್ರಿಕೆ, ಬಿತ್ತಿಪತ್ರಗಳನ್ನು ಅಂಟಿಸುವುದರ ಮೂಲಕ ಅರಿವು ಮೂಡಿಸುವಲ್ಲಿ ಯಶಸ್ವಿಯಾಗಲು NGO ಸಂಸ್ಥೆಗಳಿಂದ ಆಯೋಜಿಸಿ ಎರಡು ದಿನಗಳ ತರಬೇತಿಯನ್ನು ATI ಮೈಸೂರಿನಲ್ಲಿ ಹಮ್ಮಿಕೊಂಡು 73 ತಾಲ್ಲೂಕುಗಳ 73 ತಂಡಗಳಲ್ಲಿ ತರಬೇತಿಗಳನ್ನು ನಡೆಸಲಾಗಿದೆ. ಪ್ರಸ್ತುತ 2ನೇ ಹಂತದ ಕುಡಿಯುವ ನೀರಿನ ಗುಣಮಟ್ಟದ ಪರೀಕ್ಷೆ ತರಬೇತಿ ಕಾರ್ಯಕ್ರಮಗಳಿಗೆ ಅನುಮೋದನೆ ನೀಡಬೇಕೆಂದು ಉಲ್ಲೇಖ (3)ರಲ್ಲಿ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರವರು ವಿನಂತಿಸಿದ್ದಾರೆ. ಒಟ್ಟು 30 ಜಿಲ್ಲೆಗಳ 176 ತಾಲ್ಲೂಕುಗಳಿಂದ ಒಟ್ಟಾರೆ 2374 ಗ್ರಾಮ ಪಂಚಾಯತಿಗಳಲ್ಲಿ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲು ಒಟ್ಟಾರೆ ರೂ.4.809 ಕೋಟಿ ಅನುದಾನ ಒದಗಿಸಲಾಗಿದೆ. ಪ್ರಸ್ತುತ ರಾಸಾಯನಿಕವಾಗಿ ಕಲುಷಿತಗೊಂಡಿರುವ 73 ತಾಲ್ಲೂಕುಗಳ ವ್ಯಾಪ್ತಿಯ 732 ತಂಡಗಳಿಗೆ ತರಬೇತಿಗಳನ್ನು ಅರ್ಹ NGO ಸಂಸ್ಥೆಗಳ ಮುಖಾಂತರ ನಡೆಸಲು ಸರ್ಕಾರದ ಅನುಮತಿ ನೀಡಬೇಕಾಗಿದೆ. ಆದ್ದರಿಂದ ಈ ಆದೇಶ:

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 48 ಗ್ರಾನೀಸ(2)2012 ಬೆಂಗಳೂರು, ದಿನಾಂಕ:30.09..2013**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಗುಣಮಟ್ಟ ಸಂರಕ್ಷಣೆ ಹಾಗೂ ಬಳಕೆಯ ಬಗ್ಗೆ ಗ್ರಾಮೀಣ ಜನತೆಗೆ ಅರಿವು ಮೂಡಿಸುವುದು ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವುದರ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಗೋಡೆ ಬರಹ, ಜಾನಪದ ಗೀತೆಗಳು, ಬೀದಿ ನಾಟಕಗಳು ಹಾಗೂ ಆಧುನಿಕ ಮಾಧ್ಯಮಗಳಾದ ದೂರದರ್ಶನ, ಆಕಾಶವಾಣಿ, ದಿನಪತ್ರಿಕೆ, ಬಿತ್ತಿಪತ್ರಗಳನ್ನು ಅಂಟಿಸುವುದರ ಮೂಲಕ ಅರಿವು ಮೂಡಿಸುವಲ್ಲಿ ಯಶ್ವಸಿಯಾಗಲು ಈ ಮೊದಲೇ ಅನುಮೋದನೆಗೊಂಡ 24 **NGO** ಸಂಸ್ಥೆಗಳಿಂದ ಆಯೋಜಿಸಿ ಎರಡು ದಿನಗಳ ತರಬೇತಿಯನ್ನು 73 ತಾಲ್ಲೂಕುಗಳ 2374 ಗ್ರಾಮ ಪಂಚಾಯತಿಗಳ 732 ತಂಡಗಳಲ್ಲಿ ಆಯೋಜಿಸಲು ಅನುಮತಿ ನೀಡಲು ಸರ್ಕಾರವು ಹರ್ಷಿಸುತ್ತದೆ.

2. ಪ್ರಸ್ತುತ 73 ತಾಲ್ಲೂಕುಗಳ 2374 ಗ್ರಾಮ ಪಂಚಾಯತಿಗಳ 732 ತಂಡಗಳಲ್ಲಿ ತರಬೇತಿಯನ್ನು ನಡೆಸಲು ತಗಲುವ ವೆಚ್ಚ ರೂ.4.809ಕೋಟಿ ಅನುದಾನವನ್ನು **CE/PRED** ಬೆಂಗಳೂರು ರವರಿಗೆ, ಕೇಂದ್ರ ಪುರಸ್ಕೃತ **NRDWP - Support Activity** ಘಟಕದಡಿ ಈಗಾಗಲೇ ಬಿಡುಗಡೆ ಮಾಡಲಾಗಿದೆ. ತರಬೇತಿಯಲ್ಲಿ ಭಾಗವಹಿಸುವ ಅಧಿಕಾರಿಗಳು ಕುಡಿಯುವ ನೀರಿನ ಯೋಜನೆಗಳಿಗೆ ಸಂಬಂಧಪಟ್ಟಂತೆ ಅಗತ್ಯ ಮಾಹಿತಿಯೊಂದಿಗೆ ಭಾಗವಹಿಸಿ ಅರ್ಥಪೂರ್ಣ ಚರ್ಚೆ ಹಾಗೂ ಆಧುನಿಕ ತಂತ್ರಜ್ಞಾನ ತಳಹದಿಯಲ್ಲಿ ಮಾಹಿತಿಯನ್ನು ಪಡೆದುಕೊಂಡು ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನ ಹಾಗೂ ನಿರ್ವಹಣೆಯಲ್ಲಿ ಅಗತ್ಯವಿರುವ ಸುಧಾರಣಾ ಕ್ರಮಗಳನ್ನು ಅನುಸರಿಸುವ ನಿಟ್ಟಿನಲ್ಲಿ ಜಿಲ್ಲಾವಾರು ಗುರುತಿಸಲಾಗಿರುವ **NGO** ಸಂಸ್ಥೆಗಳಿಂದ ಆಯೋಜಿಸಿರುವ ತರಬೇತಿಯಲ್ಲಿ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಅಧಿಕಾರಿಗಳು ತಪ್ಪದೆ ಭಾಗವಹಿಸತಕ್ಕದ್ದು. ಮತ್ತು ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳು ಈ ದಿಸೆಯಲ್ಲಿ ನಡೆಸಲಾದ ಚಟುವಟಿಕೆಗಳ ಆರ್ಥಿಕ ಮತ್ತು ಭೌತಿಕ ಸಾಧನೆಗಳನ್ನು ದಿನಾಂಕ:**31.03.2014**ರೊಳಗೆ **IMIS**ನಲ್ಲಿ ದಾಖಲಿಸತಕ್ಕದ್ದು.

3. ಉಪ ನಿರ್ದೇಶಕರು HRD/IEC ರವರು ಕಳೆದ ಬಾರಿಯ ಸಾಕ್ಷ್ಯ ಚಿತ್ರದ **CD** ನೀಡಬೇಕು. ಸಾಕ್ಷ್ಯ ಚಿತ್ರ ತಯಾರಿಕೆ ಸಂಬಂಧ **KTPP** ನಿಯಮಗಳನ್ನು ಪಾಲಿಸತಕ್ಕದ್ದು ಹಾಗೂ ಸದರಿ ಚಿತ್ರಾವಳಿಯನ್ನು ಅಂತಿಮಗೊಳಿಸುವ ಮುನ್ನ ಸರ್ಕಾರದ ಮುಂದೆ ಪ್ರಾತ್ಯಕ್ಷತೆ / ನಿರೂಪಣೆ ನೀಡಿ ಅದರನ್ವಯ / ನಂತರ ಬಿಲ್ ಪಾವತಿಸಬೇಕು.

4. NGO ಸಂಸ್ಥೆಗಳು ಆಯೋಜಿಸುವ ತರಬೇತಿ ಕಾರ್ಯಕ್ರಮಗಳನ್ನು ಮಾದರಿ ಸಮೀಕ್ಷೆ ಆಧಾರದ ಮೇಲೆ ನಿರ್ದೇಶಕರು, **SIRD** ರವರು ಮೌಲ್ಯಮಾಪನ ಮಾಡಿ ಪ್ರತಿಯೊಂದು ಸಂಸ್ಥೆ ಬಗ್ಗೆ ವರದಿ ನೀಡಲು ಕ್ರಮ ವಹಿಸಬೇಕು.

5. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ **IFA** ರವರು ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ 58 ಎಎಫ್ಎಸ್ 2012 ದಿನಾಂಕ 01.04.2013ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ರಾಮಕೃಷ್ಣ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು:560 001;
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು.
10. ಸರ್ಕಾರದ ಆಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿ ಸಂಕೀರ್ಣ ನಂ55, 4ನೇ ಮಹಡಿ, ಅಭಯ ಕಾಂಪ್ಲೆಕ್ಸ್, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-20.
12. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಅಧ್ಯಕ್ಷರು.
13. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು.
14. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
15. ರಾಜ್ಯದ ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರರು.
16. ರಾಜ್ಯದ ಎಲ್ಲಾ (38) ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕರ ಇಂಜಿನಿಯರ್‌ಗಳು.
17. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, PRED, ಬೆಂಗಳೂರು-20.
18. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿಗಳು.
19. ನಿರ್ದೇಶಕರು, KRWSSA ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿ/ನಿರ್ದೇಶಕರು(ಗ್ರಾಮಸ್ವರಾಜ್)/ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
20. ಮ್ಯಾನೇಜರ್, ಕಾರ್ಪೋರೇಷನ್ ಬ್ಯಾಂಕ್, ಮಲ್ಲೇಶ್ವರಂ ಶಾಖೆ, ಬೆಂಗಳೂರು-3;
21. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
24. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
25. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.